ಕನ್ನಡ ಪೋಸ್ಟ್
KANNADA POST
ಇದು ಸುದ್ದಿ ವಿಳಾಸ
ಸಂಪಾದಕ : ಮಂಜು ಬನವಾಸೆ
ಕನ್ನಡ ದಿನಪತ್ರಿಕೆ
ಹಾಸನ E-mail : kannadapostnews@gmail.com / ಕನ್ನಡ post Price: ₹1
Vol.No.02 | Issue. 174 | Pages. 2 | Date: 18-06-2026, THURSDAY RNI NO: KARKAN/2024/89601 Kannada Daily
ಸಂಪುಟ : 02 - ಸಂಚಿಕೆ : 174 - ಪುಟಗಳು : 2 18-06-2026 ಗುರುವಾರ Ph: 8762954248 ದರ : ₹1

# ರೈಲ್ವೆ ಮೇಲ್ಸೇತುವೆ ಕಾಮಗಾರಿ ಚುರುಕು

## ನವೆಂಬರ್ ಗಡುವು : ಅಧಿಕಾರಿಗಳಿಗೆ ಸಂಸದರ ಖಡಕ್ ಸೂಚನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಹೃದಯಭಾಗದಲ್ಲಿ ಹೈಟೆಕ್ ಬಸ್ ನಿಲ್ದಾಣದ ಎದುರು ನಿರ್ಮಾಣವಾಗುತ್ತಿರುವ ರೈಲ್ವೆ ಮೇಲ್ಸೇತುವೆ ಕಾಮಗಾರಿಯನ್ನು ನವೆಂಬರ್ ಅಂತ್ಯದೊಳಗೆ ಪೂರ್ಣಗೊಳಿಸಿ ಸಾರ್ವಜನಿಕರ ಸಂಚಾರಕ್ಕೆ ಮುಕ್ತಗೊಳಿಸಲಾಗುವುದು ಎಂದು ಸಂಸದ ಶ್ರೇಯಸ್ ಪಟೇಲ್ ತಿಳಿಸಿದರು.



ರೈಲ್ವೆ ಮೇಲ್ಸೇತುವೆ ಕಾಮಗಾರಿ ನಡೆಯುತ್ತಿರುವ ಸ್ಥಳಕ್ಕೆ ಅಧಿಕಾರಿಗಳು ಹಾಗೂ ಗುತ್ತಿಗೆದಾರರೊಂದಿಗೆ ಇಂದು ಭೇಟಿ ನೀಡಿ ಪರಿಶೀಲನೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು.

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಂದ ಅಗತ್ಯ ಅನುದಾನ ಈಗಾಗಲೇ ಬಿಡುಗಡೆಯಾಗಿದ್ದು, ಕಾಮಗಾರಿ ವೇಗವಾಗಿ ಸಾಗುತ್ತಿದೆ. ಬಹುತೇಕ ಕಾಮಗಾರಿ ಪೂರ್ಣಗೊಂಡಿದ್ದು, ಉಳಿದ ಕಾಮಗಾರಿಯನ್ನೂ ನಿಗದಿತ ಅವಧಿಯೊಳಗೆ ಮುಗಿಸುವಂತೆ ಸಂಬಂಧಪಟ್ಟ ಅಧಿಕಾರಿಗಳು ಮತ್ತು ಗುತ್ತಿಗೆದಾರರಿಗೆ ಸೂಚನೆ ನೀಡಲಾಗಿದೆ ಎಂದು ಹೇಳಿದರು.

ಆತಂಕ ಬೇಡ: ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ಪರಿಷ್ಕರಣೆ ಕುರಿತು ಪ್ರತಿಕ್ರಿಯಿಸಿದ ಅವರು, ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳು ಯಾವುದೇ ರೀತಿಯ ಆತಂಕ ಪಡುವ ಅಗತ್ಯವಿಲ್ಲ ಎಂದರು.

ಮತದಾರರ ಪಟ್ಟಿ ಪರಿಷ್ಕರಣೆ ನಡೆಯುವಂತೆ ಸರ್ಕಾರದ ಯೋಜನೆಗಳಿಗೂ ಕಾಲಕಾಲಕ್ಕೆ ಪರಿಷ್ಕರಣೆ ಅಗತ್ಯವಾಗುತ್ತದೆ. ಮುಖ್ಯಮಂತ್ರಿಗಳು ಮತ್ತೊಮ್ಮೆ ನೋಂದಣಿ ಮಾಡಿಸಿಕೊಳ್ಳುವಂತೆ ಸೂಚಿಸಿದ್ದು, ಅದನ್ನು ಎಲ್ಲರೂ ಪಾಲಿಸಬೇಕು. ದಾಖಲೆಗಳನ್ನು ಸಲ್ಲಿಸಿದ ಪ್ರತಿಯೊಬ್ಬ ಅರ್ಹ ಫಲಾನುಭವಿಯ ಖಾತೆಗೆ ಹಣ ಜಮೆಯಾಗಲಿದೆ ಎಂದು ಸ್ಪಷ್ಟಪಡಿಸಿದರು. ಮಹಿಳೆಯರು ಕಚೇರಿಗಳಿಗೆ ಅಲೆದಾಡುವ ಅವಶ್ಯಕತೆ ಇಲ್ಲ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅವರಿರುವ ಸ್ಥಳದಲ್ಲಿಯೇ ನೋಂದಣಿ ಪ್ರಕ್ರಿಯೆ ನಡೆಸಲಿದೆ ಎಂದು ತಿಳಿಸಿದರು.

ಟೀಕೆಗೆ ತಿರುಗೇಟು: ಗೃಹಲಕ್ಷ್ಮಿ ಹಣ ಸ್ಥಗಿತಗೊಳ್ಳಲಿದೆ ಎಂಬ ವದಂತಿ ಹರಡುತ್ತಿರುವ ವಿರೋಧ ಪಕ್ಷದವರು ಇಂಥ ಸುಳ್ಳು ಸುದ್ದಿ ಹಬ್ಬಿಸುವುದನ್ನು ನಿಲ್ಲಿಸಬೇಕು. ಇಲ್ಲ ಸಲ್ಲದ ಟೀಕೆ ಮಾಡುವುದು ಸರಿಯಲ್ಲ ಎಂದು ತಿರುಗೇಟು ನೀಡಿದರು.

ಕಾಂಗ್ರೆಸ್ ಸರ್ಕಾರ ಬಡವರು, ದೀನ ದಲಿತರು ಮತ್ತು ಸಾಮಾನ್ಯ ವರ್ಗದ ಜನರ ಪರವಾಗಿ ಕಾರ್ಯನಿರ್ವಹಿಸುತ್ತಿದ್ದು, ವರ್ಷಕ್ಕೆ 56 ಸಾವಿರ ಕೋಟಿಯಂತೆ

ಕಳೆದ 3 ವರ್ಷಗಳಲ್ಲಿ ಗ್ಯಾರಂಟಿ ಯೋಜನೆಗಳಿಗೆ ಸಾವಿರಾರು ವೆಚ್ಚ ಮಾಡಿದೆ. 2028 ರಲ್ಲಿಯೂ ಜನಪರ ಕಾರ್ಯಕ್ರಮ ಮುಂದುವರಿಸಲಾಗುವುದು ಎಂದು ವಿಶ್ವಾಸ ವ್ಯಕ್ತಪಡಿಸಿದರು.

### ಡಿಸಿ ವಿರುದ್ಧ ಆರೋಪಕ್ಕೆ ಆಕ್ಷೇಪ

ಇದೇ ವೇಳೆ ಮಾಜಿ ಸಚಿವ ಎಚ್.ಡಿ. ರೇವಣ್ಣ ಅವರು ಜಿಲ್ಲಾಧಿಕಾರಿ ವಿರುದ್ಧ ಮಾಡಿರುವ ಆರೋಪಕ್ಕೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ ಶ್ರೇಯಸ್, ಜಿಲ್ಲಾಧಿಕಾರಿಗಳು ಪ್ರಾಮಾಣಿಕತೆ ಹಾಗೂ ದಕ್ಷತೆಯಿಂದ ಕೆಲಸ ಮಾಡುತ್ತಿದ್ದಾರೆ ಎಂದು ಸಾರ್ವಜನಿಕರೇ ಹೇಳುತ್ತಿದ್ದಾರೆ. ಸರ್ಕಾರಿ ಸಭೆಯಲ್ಲಿ ಅಧಿಕಾರಿಗಳ ವಿರುದ್ಧ ಆಧಾರ ರಹಿತ ಆರೋಪ ಮಾಡುವುದು ಸಂವಿಧಾನ ಹಾಗೂ ಆಡಳಿತ ವ್ಯವಸ್ಥೆಯ ನಿಯಮಗಳಿಗೆ ವಿರುದ್ಧವಾಗಿದೆ. ಯಾವುದೇ ಆರೋಪ ಮಾಡುವುದಾದರೆ ಅಗತ್ಯ ದಾಖಲೆಗಳೊಂದಿಗೆ ಮಾಡಬೇಕು ಎಂದು ತಿರುಗೇಟು ನೀಡಿದರು. ಮಹಿಳೆಯರಿಗೆ ಶೇ.33 ಮೀಸಲಾತಿ ನೀಡಬೇಕೆಂದು ಹೋರಾಟ ನಡೆಯುತ್ತಿರುವಾಗ ಮಹಿಳಾ ಅಧಿಕಾರಿಗಳ ಬಗ್ಗೆ ಈ ರೀತಿಯ ಹೇಳಿಕೆ ಸರಿಯಲ್ಲ ಎಂದು ಖಂಡಿಸಿದರು.

ಪಿಂಚಣಿ ಸ್ಥಗಿತ-ವ್ಯತ್ಯಾಸ ಕಾರಣ: ಕೆಲವರಿಗೆ ಪಿಂಚಣಿ ಹಣ ಸ್ಥಗಿತಗೊಂಡಿರುವ ಕುರಿತು ಮಾತನಾಡಿದ ಅವರು, ಆಧಾರ್ ಹಾಗೂ ಇತರ ದಾಖಲೆಗಳಲ್ಲಿ ವಯಸ್ಸು ಸೇರಿದಂತೆ ಮಾಹಿತಿ ಹೊಂದಾಣಿಕೆಯಾಗದ ಕಾರಣ ಪಾವತಿ ತಾತ್ಕಾಲಿಕವಾಗಿ ಸ್ಥಗಿತಗೊಂಡಿದೆ. ಅಗತ್ಯ ದಾಖಲೆಗಳನ್ನು ಸಲ್ಲಿಸಿದ ತಕ್ಷಣ ಪಿಂಚಣಿ ಹಣ ಬಿಡುಗಡೆಯಾಗಲಿದೆ. ಈ ಪರಿಶೀಲನಾ ಪ್ರಕ್ರಿಯೆಯನ್ನು ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ನಡೆಸಲಾಗುತ್ತಿದೆ ಎಂದು ಹೇಳಿದರು.

ಸ್ಥಾನ ಸಿಗುವ ವಿಶ್ವಾಸ: ಅರಸೀಕೆರೆ ಶಾಸಕ ಕೆ.ಎಂ.ಶಿವಲಿಂಗೇಗೌಡ ಅವರಿಗೆ ಸಚಿವ ಸ್ಥಾನ ದೊರೆಯುವ ಕುರಿತು ಪ್ರತಿಕ್ರಿಯಿಸಿದ ಶ್ರೇಯಸ್ ಪಟೇಲ್, ಈ ಬಾರಿ ಹಾಸನ ಜಿಲ್ಲೆಗೆ ಸಚಿವ ಸಂಪುಟದಲ್ಲಿ ಪ್ರಾತಿನಿಧ್ಯ ಸಿಗುವ ವಿಶ್ವಾಸವಿದೆ. ಶಿವಲಿಂಗೇಗೌಡ ಅವರು ಸಚಿವರಾಗುವ ಸಾಧ್ಯತೆ ಹೆಚ್ಚಿದೆ ಎಂದು ಅಭಿಪ್ರಾಯಪಟ್ಟರು.

ಟಿಒಣಡಿ ಹೊಳೆನರಸೀಪುರ ತಾಲೂಕು ಹಂಗರಹಳ್ಳಿ ಬಳಿಯ ರೈಲ್ವೆ ಮೇಲ್ಸೇತುವೆ ಕಾಮಗಾರಿಯನ್ನು ಸಂಸದರು ವೀಕ್ಷಣೆ ಮಾಡಿದರು. ಆದಷ್ಟು ಬೇಗ ಕಾಮಗಾರಿ ಪೂರ್ಣಗೊಳಿಸುವಂತೆ ಅಧಿಕಾರಿಗಳು ಹಾಗೂ ಗುತ್ತಿಗೆದಾರರಿಗೆ ಸೂಚನೆ ನೀಡಿದರು. ಜೊತೆಗೆ ಕಾಮಗಾರಿಯನ್ನು ಗುಣಮಟ್ಟ ಕಾಯ್ದುಕೊಳ್ಳುವಂತೆ ಸಲಹೆ ನೀಡಿದರು.

# 98ನೇ ವಸಂತಕ್ಕೆ ಕಾಲಿಟ್ಟ ಜಿ.ಎಲ್. ಮುದ್ದೇಗೌಡ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಹಿರಿಯ ಸ್ವಾತಂತ್ರ್ಯ ಹೋರಾಟಗಾರರು, ಉದ್ಯಮಿ, ಸಮಾಜ ಸೇವಕ ಹಾಗೂ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಹಾಸನ ಜಿಲ್ಲಾ ಶಾಖೆ ಕಟ್ಟಡದ ಪ್ರಮುಖ ದಾನಿಗಳಾದ ಶ್ರೀ ಜಿ.ಎಲ್. ಮುದ್ದೇಗೌಡರು 97 ವರ್ಷಗಳನ್ನು ಯಶಸ್ವಿಯಾಗಿ ಪೂರೈಸಿ 98ನೇ ವಸಂತಕ್ಕೆ ಕಾಲಿಟ್ಟಿದ್ದಾರೆ.


ಈ ಶುಭ ಹಿನ್ನೆಲೆಯಲ್ಲಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಕಾರ್ಯಕಾರಿ ಮಂಡಳಿಯ ಸದಸ್ಯರು ಮುದ್ದೇಗೌಡರನ್ನು ಖುದ್ದಾಗಿ ಭೇಟಿ ಮಾಡಿ, ಪುಷ್ಪಗುಚ್ಛ ನೀಡಿ ಆತ್ಮೀಯವಾಗಿ ಅಭಿನಂದಿಸಿದರು.

ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಜಿಲ್ಲಾ ಶಾಖೆಯ ಬೆಳವಣಿಗೆಗೆ ಹಾಗೂ ಒಟ್ಟಾರೆ ಸಮಾಜ ಸೇವಾ ಕಾರ್ಯಗಳಿಗೆ ಜಿ.ಎಲ್. ಮುದ್ದೇಗೌಡರು ನೀಡಿರುವ ಅಪಾರ ಕೊಡುಗೆ ಹಾಗೂ ಮಾರ್ಗದರ್ಶನವನ್ನು ಈ ಸಂದರ್ಭದಲ್ಲಿ ಪದಾಧಿಕಾರಿಗಳು ಕೃತಜ್ಞತೆಯಿಂದ ಸ್ಮರಿಸಿದರು. ಮುದ್ದೇಗೌಡರ ಬದುಕು ಮತ್ತು ಸಮಾಜಮುಖಿ ಕಾರ್ಯಗಳು ಇಂದಿನ ಪೀಳಿಗೆಗೆ ಮಾದರಿಯಾಗಿವೆ ಎಂದು ಪ್ರಶಂಸಿಸಿದರು.

ಅಭಿನಂದನಾ ಸಂದರ್ಭದಲ್ಲಿ ರೆಡ್ ಕ್ರಾಸ್ ಸಂಸ್ಥೆಯ ಸಭಾಪತಿ ಹೆಮ್ಮಿಗೆ ಮೋಹನ್, ಉಪಸಭಾಪತಿಗಳಾದ ಡಾ. ವೈ.ಎಸ್. ವೀರಭದ್ರಪ್ಪ, ಶಬ್ಬೀರ್ ಅಹ್ಮದ್, ಜಯೇಂದ್ರಕುಮಾರ್, ಅಮ್ಜಾದ್ ಖಾನ್, ಎಚ್.ಡಿ. ಕುಮಾರ್, ಎಸ್.ಎಸ್. ಪಾಷಾ, ವೈ.ಎನ್. ಸುಬ್ಬಸ್ವಾಮಿ, ಬಿ.ಆರ್. ಉದಯ್ ಕುಮಾರ್, ಕೆ.ಟಿ. ಜಯಶ್ರೀ, ಡಾ. ಹೇಮಲತ ಪಟ್ಟಾಭಿ, ಡಾ. ಭಾರತಿ ರಾಜಶೇಖರ್, ಡಾ. ವಿ.ಕೆ. ಅಬ್ದುಲ್ ಬಶೀರ್, ಗಿರೀಶ್, ಜಯಪ್ರಕಾಶ್, ಗಿರಿಗೌಡ, ಭೀಮರಾಜ್, ಡಾ. ರಂಗಲಕ್ಷ್ಮಿ ಸೇರಿದಂತೆ ಕಾರ್ಯಕಾರಿ ಮಂಡಳಿಯ ಇತರ ಸದಸ್ಯರು ಉಪಸ್ಥಿತರಿದ್ದರು.

# ಕೇಂದ್ರ ಕನ್ನಡ ಸಾಹಿತ್ಯ ವೇದಿಕೆಗೆ ಪದಾಧಿಕಾರಿಗಳ ಆಯ್ಕೆ






**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ : ಕೇಂದ್ರ ಕನ್ನಡ ಸಾಹಿತ್ಯ ವೇದಿಕೆ ಹಾಸನ ಜಿಲ್ಲಾ ಘಟಕಕ್ಕೆ ಸಂಘಟನೆಯನ್ನು ಗಟ್ಟಿಗೊಳಿಸುವ ನಿಟ್ಟಿನಲ್ಲಿ ಟ್ರಸ್ಟಿಗಳ ಸಭೆಯಲ್ಲಿ ಚರ್ಚಿಸಿ ಜಿಲ್ಲಾ ಘಟಕದ ಕಾರ್ಯದರ್ಶಿಯಾಗಿ ಶೈಕ್ಷಣಿಕ ಸಂಪನ್ಮೂಲ ವ್ಯಕ್ತಿ ಪ್ರತಿಭಾ ಸುದರ್ಶನ್ ಹಾಗೂ ಕೋಶಾಧ್ಯಕ್ಷರನ್ನಾಗಿ ಸಂಘಟಕ, ಆರಕ್ಷಕರಾದ ನವೀನ ಎಸ್.ಬಿ. ಅವರುಗಳನ್ನು ಆಯ್ಕೆ ಮಾಡಲಾಗಿದೆ ಎಂದು ಜಿಲ್ಲಾಧ್ಯಕ್ಷ ವಾಸು ಸಮುದ್ರವಳ್ಳಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.





**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ : ಕೇಂದ್ರ ಕನ್ನಡ ಸಾಹಿತ್ಯ ವೇದಿಕೆ ಹಾಸನ ಜಿಲ್ಲಾ ಘಟಕಕ್ಕೆ ಸಂಘಟನೆಯನ್ನು ಗಟ್ಟಿಗೊಳಿಸುವ ನಿಟ್ಟಿನಲ್ಲಿ ಟ್ರಸ್ಟಿಗಳ ಸಭೆಯಲ್ಲಿ ಚರ್ಚಿಸಿ ಜಿಲ್ಲಾ ಘಟಕದ ಉಪಾಧ್ಯಕ್ಷರನ್ನಾಗಿ ಸಂಘಟಕ, ಕವಿ ಆರ್.ಬಿ. ರಂಗನಾಥ್ ಅರಕಲಗೂಡು ಹಾಗೂ ಸಂಘಟಕಿ, ಕವಯಿತ್ರಿ, ಸಾಮಾಜಿಕ ಹೋರಾಟಗಾರ್ತಿ ಎಚ್.ಎಸ್. ಭಾನುಮತಿ ಅವರುಗಳನ್ನು ಆಯ್ಕೆ ಮಾಡಲಾಗಿದೆ ಎಂದು ಜಿಲ್ಲಾಧ್ಯಕ್ಷ ವಾಸು ಸಮುದ್ರವಳ್ಳಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿ ವೇತನಕ್ಕೆ ಅರ್ಜಿ ಆಹ್ವಾನ

ಹಾಸನ : ಹಾಸನ ಜಿಲ್ಲೆಯಲ್ಲಿ 1ನೇ ತರಗತಿಯಿಂದ 10ನೇ ತರಗತಿವರೆಗೆ ವ್ಯಾಸಂಗ ಮಾಡುತ್ತಿರುವ ವಿಕಲಚೇತನ ವಿದ್ಯಾರ್ಥಿನಿಯರಿಗೆ 2026-27ನೇ ಸಾಲಿನಲ್ಲಿ ಸ್ಟೇಟ್ ಸ್ಕಾಲರ್‌ಶಿಪ್ ಪೋರ್ಟಲ್‌ನಲ್ಲಿ (SSP) ವಿದ್ಯಾರ್ಥಿವೇತನ ಯೋಜನೆಯಡಿ ವಿಕಲಚೇತನ ವಿದ್ಯಾರ್ಥಿಗಳಿಗೆ ತರಗತಿಗನುಗುಣವಾಗಿ ವಿದ್ಯಾರ್ಥಿ ವೇತನ ಮಂಜೂರು ಮಾಡುವ ಸಂಬಂಧ, ಶೇ.40ಕ್ಕಿಂತ ಹೆಚ್ಚು ಅಂಕಗಳಿಸಿ ಉತ್ತೀರ್ಣರಾಗಿರುವ ವಿಕಲಚೇತನ ವಿದ್ಯಾರ್ಥಿ/ನಿಯರುಗಳಿಂದ ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಆಹ್ವಾನಿಸಲಾಗಿದೆ ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ವೆಬ್‌ಸೈಟ್ https://ssp.postmatric.karnataka.gov.in ಮೂಲಕ ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ : 08172-264546/29554 ಸಂಪರ್ಕಿಸಬಹುದಾಗಿದೆ.

# ರಿಜ್ವಾನ್‌ಗೆ ಮಂತ್ರಿಸ್ಥಾನಕ್ಕೆ ಆಗ್ರಹ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸಿಎಂ ಡಿ.ಕೆ.ಶಿವಕುಮಾರ್ ಅವರ ಸಚಿವ ಸಂಪುಟದಲ್ಲಿ ಯುವ ಶಾಸಕ ರಿಜ್ವಾನ್ ಅರ್ಷದ್ ಅವರಿಗೆ ಮಂತ್ರಿಸ್ಥಾನ ನೀಡಬೇಕು ಎಂದು ಯೂತ್ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಸೈಯದ್ ಇರ್ಫಾನ್ ಒತ್ತಾಯಿಸಿದರು.

ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅರ್ಷದ್ ಅವರು ಶಿಸ್ತಿನ ಸಿಪಾಯಿ ಆಗಿದ್ದಾರೆ. ಯೂತ್ ಕಾಂಗ್ರೆಸ್‌ನಲ್ಲಿದ್ದಾಗಿನಿಂದಲೂ ಪಕ್ಷ ನಿಷ್ಠರಾಗಿದ್ದಾರೆ. ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರಲು ಅವರ ಶ್ರಮವೂ ಇದೆ. ಹಾಗಾಗಿ ಮೂರ್ನಾಲ್ಕು ಮಂದಿ ಮುಸ್ಲಿಂ ಶಾಸಕರಿಗೆ ಸಂಪುಟದಲ್ಲಿ ಪ್ರಾತಿನಿಧ್ಯ ಕೊಡಬೇಕು. ಆ ಪೈಕಿ ಅರ್ಷದ್ ಅವರನ್ನೂ ಪರಿಗಣಿಸಬೇಕು. ಹೀಗಾದರೆ ಪಕ್ಷ ಸಂಘಟನೆಗೂ ಅನುಕೂಲ ಆಗಲಿದೆ ಎಂದು ಆಗ್ರಹಿಸಿದರು.

ಮತ್ತೊಬ್ಬ ಮುಖಂಡ ಉಮೇಶ್ ಮಾತನಾಡಿ, ನಮ್ಮ ಜಿಲ್ಲೆಯ ಏಕೈಕ ಶಾಸಕರಾದ ಕೆ.ಎಂ.ಶಿವಲಿಂಗೇಗೌಡರು ಹಾಗೂ ಹಿರಿಯರಾದ ಬಿ.ಶಿವರಾಂ ಅವರಿಗೂ ಮಂತ್ರಿಸ್ಥಾನ ನೀಡಬೇಕು ಎಂದು ಒತ್ತಾಯಿಸಿದರು.

ಮತ್ತೊಬ್ಬ ಮುಖಂಡ ವೆಂಕಟೇಗೌಡ ಸಹ, ಶಿವಲಿಂಗೇಗೌಡರಿಗೆ ಮಂತ್ರಿ ಸ್ಥಾನ ಕೊಡುವುದು, ಬಿಡುವುದು ಹೈಕಮಾಂಡ್‌ಗೆ ಬಿಟ್ಟಿದ್ದು, ಆದರೆ ಯುವಕರಾಗಿರುವ ರಿಜ್ವಾನ್ ಅವರಿಗೆ ಮಂತ್ರಿ ಕೊಡಲೇಬೇಕು ಎಂದು ಆಗ್ರಹಿಸಿದರು. ಸುದ್ದಿಗೋಷ್ಠಿಯಲ್ಲಿ ಆನಂದ್, ಸೈಯದ್ ಇದ್ದರು.

# ವಿಶ್ವಂ ಫೌಂಡೇಶನ್‌ನಿಂದ ಕಾಯಕಲ್ಪ

## ನಗರದ ಎಂ.ಕೃಷ್ಣ ಸರ್ಕಾರಿ ಶಾಲೆ ಅಭಿವೃದ್ಧಿ ಕಾಮಗಾರಿ ನಾಳೆ ಉದ್ಘಾಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ವಿಶ್ವಂ ಫೌಂಡೇಶನ್ ವತಿಯಿಂದ ನಗರದ ಕುವೆಂಪು ನಗರದಲ್ಲಿರುವ ಎ.ಕೃಷ್ಣ ಸರ್ಕಾರಿ ಶಾಲೆಯನ್ನು ಸುಮಾರು 10 ಲಕ್ಷ ರೂ. ವೆಚ್ಚದಲ್ಲಿ ಅಭಿವೃದ್ಧಿಪಡಿಸಿದ್ದು, ಲೋಕಾರ್ಪಣೆ ಕಾರ್ಯಕ್ರಮ ಜೂ.18 ರಂದು ನಡೆಯಲಿದೆ ಎಂದು ಫೌಂಡೇಶನ್‌ನ ಟ್ರಸ್ಟಿ ಕೌಶಿಕ್ ಗೌಡ ತಿಳಿಸಿದರು.




ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2022 ರಲ್ಲಿ ಆರಂಭವಾದ ಫೌಂಡೇಶನ್ ಸ್ವಯಂ ಸೇವಕರಿಂದಲೇ ನಡೆಯುತ್ತಿದ್ದು, ಶಿಕ್ಷಣ, ಆಶ್ರಯ, ಕೌಶಲ್ಯಾಭಿವೃದ್ಧಿ ಹಾಗೂ ವೃತ್ತಿಪರ ತರಬೇತಿ, ಮಾನಸಿಕ ಆರೋಗ್ಯ ವೃದ್ಧಿಗೆ ಒತ್ತು ನೀಡಲಾಗುತ್ತಿದೆ ಎಂದರು.

ನಮ್ಮ ಈ ಕಾರ್ಯಕ್ಕೆ ವೈದ್ಯರು, ಶಿಕ್ಷಕರು, ಉದ್ಯಮಿಗಳು, ಸರ್ಕಾರಿ ನೌಕರರು ಕೈಜೋಡಿಸಿದ್ದಾರೆ. ಈ ಮೂಲಕ ಆರ್ಥಿಕವಾಗಿ ಹಿಂದುಳಿದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ, ಅಗತ್ಯವಿರುವ ಮಕ್ಕಳ ಮತ್ತು ಕುಟುಂಬಗಳ ಸುರಕ್ಷತೆ, ರಕ್ಷಣೆ, ಯುವ ಜನರ ಜೀವನೋಪಾಯಕ್ಕಾಗಿ ಅಗತ್ಯವಾದ ಕೌಶಲ್ಯ ನೀಡಲು ತರಬೇತಿ, ಆರೋಗ್ಯ ಸೇವೆ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಸ್ಥಳೀಯ ಶಾಸಕರಾದ ಹೆಚ್.ಪಿ.ಸ್ವರೂಪ್ ಪ್ರಕಾಶ್, ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ, ಎಸ್ಪಿ ಶುಭಾನ್ವಿತಾ, ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ದಾಕ್ಷಾಯಿಣಿ, ಜಿಪಂ ಸಿಇಒ ಶುಭಂ ಶುಕ್ಲ, ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಬಲರಾಂ ಮೊದಲಾದವರು ಆಗಮಿಸಿ ಉದ್ಘಾಟನೆ ನೆರವೇರಿಸಲಿದ್ದಾರೆ ಎಂದು ತಿಳಿಸಿದರು.

ಮತ್ತೊಬ್ಬ ಸದಸ್ಯ ಪ್ರಜ್ವಲ್ ಮಾತನಾಡಿ, ಈವರೆಗೆ ಲಸಿಕಾ ಅಭಿಯಾನ, ಉಚಿತ ಆರೋಗ್ಯ ತಪಾಸಣಾ ಶಿಬಿರ, ವೈದ್ಯಕೀಯ ಸಲಹೆ, ಸರ್ಕಾರಿ ಶಾಲೆಗಳಲ್ಲಿ ಕೌಶಲ್ಯಾಭಿವೃದ್ಧಿ ಕಾರ್ಯಾಗಾರ, ಯೋಗ ಮತ್ತು ಧ್ಯಾನ ಶಿಬಿರ, ಗ್ರಾಮೀಣ ಮಕ್ಕಳಿಗೆ ಆರೋಗ್ಯ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ಈ ಎಲ್ಲ ಸಮಾಜಮುಖಿ ಕಾರ್ಯಕ್ರಮಗಳ ಜೊತೆಗೆ ಅನಿವಾಸಿ ಭಾರತೀಯರ ಮಕ್ಕಳಿಗೆ ಕನ್ನಡ ಕಲಿಸುವ ಕೆಲಸವನ್ನೂ ಮಾಡಲಾಗುತ್ತಿದೆ.

ಭವಿಷ್ಯದಲ್ಲಿ ಮತ್ತಷ್ಟು ಸರ್ಕಾರಿಗಳನ್ನು ಅಭಿವೃದ್ಧಿ ಪಡಿಸಿ ವಿದ್ಯಾರ್ಥಿಗಳ ಸಬಲೀಕರಣ, ಮಹಿಳಾ ಆರೋಗ್ಯ ಕಾರ್ಯಕ್ರಮ ಹಮ್ಮಿಕೊಳ್ಳಲು ಉದ್ದೇಶಿಸಲಾಗಿದ್ದು, ಇದಕ್ಕೆ ಮತ್ತಷ್ಟು ಸ್ವಯಂ ಸೇವಕರು ಸಹಕಾರ ನೀಡಿದರೆ ಎಲ್ಲರೂ ಒಂದು ಕುಟುಂಬದ ರೀತಿಯಲ್ಲಿ ಮತ್ತಷ್ಟು ಅನುಕೂಲ ಆಗಲಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಕೃತಾ ವಸಂತ್, ತಾನ್ಯ, ಮೇಘ ಮೊದಲಾದವರಿದ್ದರು.

# ವೀರಶೈವ ಲಿಂಗಾಯತ ಮಹಾಸಭೆ ಸದಸ್ಯತ್ವ ಅಭಿಯಾನಕ್ಕೆ ಚಾಲನೆ

## ಗ್ರಾಮ ಮಟ್ಟದವರೆಗೆ ಸಂಘಟನೆ ಬಲಪಡಿಸಲು ಕರೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ : ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ ಸಂಘಟನೆಗೆ ಮತ್ತಷ್ಟು ಬಲ ತುಂಬುವ ಉದ್ದೇಶದಿಂದ ಸದಸ್ಯತ್ವ ನೋಂದಣಿ ಅಭಿಯಾನಕ್ಕೆ ಅಧಿಕೃತ ಚಾಲನೆ ನೀಡಲಾಯಿತು.

ಹಾಸನ ನಗರದ ಶ್ರೀ ಬಸವೇಶ್ವರ ದೇವಾಲಯದ ಆವರಣದಲ್ಲಿ ನಡೆದ ಹಾಸನ ತಾಲ್ಲೂಕು ಘಟಕದ ಸಭೆಯಲ್ಲಿ ಸಂಘಟನೆಯ ವಿಸ್ತರಣೆ, ಧಾರ್ಮಿಕ ಕಾರ್ಯಕ್ರಮಗಳು ಹಾಗೂ ಸಮಾಜಮುಖಿ ಚಟುವಟಿಕೆಗಳ ಕುರಿತು ಮಹತ್ವದ ನಿರ್ಣಯಗಳನ್ನು ಕೈಗೊಳ್ಳಲಾಯಿತು. ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಹಾಸನ ತಾಲ್ಲೂಕು ಘಟಕದ ಅಧ್ಯಕ್ಷ ಕಟ್ಟಾಯ ಶಿವಕುಮಾರ್, ರಾಷ್ಟ್ರೀಯ ಹಾಗೂ ರಾಜ್ಯ ಮಟ್ಟದಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆ ಸಂಘಟನಾತ್ಮಕವಾಗಿ



ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದ್ದು, ಅದರ ನಿರ್ದೇಶನದಂತೆ ಗ್ರಾಮ, ಗ್ರಾಮ ಪಂಚಾಯಿತಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸದಸ್ಯರನ್ನು ನೋಂದಾಯಿಸುವ ಮೂಲಕ ಸಂಘಟನೆಯನ್ನು ತಳಮಟ್ಟದಿಂದ ಬಲಪಡಿಸಬೇಕಾಗಿದೆ ಎಂದು ಹೇಳಿದರು. ಸಮಾಜದ ಪ್ರತಿಯೊಬ್ಬರೂ ಸದಸ್ಯತ್ವ ಅಭಿಯಾನದಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಸಂಘಟನೆಯ ಬೆಳವಣಿಗೆಗೆ ಕೈಜೋಡಿಸಬೇಕು ಎಂದು ಅವರು ಮನವಿ ಮಾಡಿದರು. ಈ ಸಂದರ್ಭದಲ್ಲಿ ಸದಸ್ಯತ್ವ ನೋಂದಣಿ ಕಾರ್ಯದಲ್ಲಿ ಗಮನಾರ್ಹ ಸಾಧನೆ ಮಾಡಿದ ಪದಾಧಿಕಾರಿಗಳು ಮತ್ತು ಕಾರ್ಯಕರ್ತರನ್ನು ವಿಶೇಷವಾಗಿ ಸನ್ಮಾನಿಸಿ ಗೌರವಿಸಲಾಯಿತು. ಅವರ ಸೇವೆಯನ್ನು ಸಭೆಯಲ್ಲಿ ಪ್ರಶಂಸಿಸಲಾಯಿತು.

ಸಭೆಯಲ್ಲಿ ಮಹಿಳಾ ನಿರ್ದೇಶಕಿಯರಾದ ಅನುಸೂಯ ಕಲ್ಯಾಣಕುಮಾರ್, ಸುಶೀಲಾ ಪಾಲನೇತ್ರ, ಸವಿತಾ ಭೂಷಣ್ ಹಾಗೂ ಶೈಲಾ ಮದನ್ ಸೇರಿದಂತೆ ಸದಸ್ಯತ್ವ ಅಭಿಯಾನದಲ್ಲಿ ಹೆಚ್ಚು ಸದಸ್ಯರನ್ನು ನೋಂದಾಯಿಸಿದ ಮಹಿಳಾ ಪದಾಧಿಕಾರಿಗಳನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಿ ಅಭಿನಂದಿಸಲಾಯಿತು. ಮತ್ತೊಂದು ಮಹತ್ವದ ನಿರ್ಧಾರವಾಗಿ, ಬಾಳೆಹೊನ್ನೂರಿನ ರಂಭಾಪುರಿ ಮಠದ ಜಗದ್ಗುರುಗಳನ್ನು ಹಾಸನಕ್ಕೆ ಆಹ್ವಾನಿಸಿ ಲಿಂಗಪೂಜೆ, ಲಿಂಗಾಧಾರಣೆ ಸೇರಿದಂತೆ ವಿವಿಧ ಧಾರ್ಮಿಕ ಮತ್ತು ಆಧ್ಯಾತ್ಮಿಕ ಕಾರ್ಯಕ್ರಮಗಳನ್ನು ಆಯೋಜಿಸಲು ತೀರ್ಮಾನಿಸಲಾಯಿತು. ಸಮಾಜದಲ್ಲಿ ಧಾರ್ಮಿಕ ಜಾಗೃತಿ ಮತ್ತು ಬಸವ ತತ್ವಗಳ ಪ್ರಚಾರಕ್ಕೆ ಇಂತಹ ಕಾರ್ಯಕ್ರಮಗಳು ಸಹಕಾರಿಯಾಗಲಿವೆ ಎಂದು ಅಭಿಪ್ರಾಯ ವ್ಯಕ್ತವಾಯಿತು. ಸಮಾಜ ಸೇವೆಯ ಅಂಗವಾಗಿ ಸ್ಥಳೀಯ ಆಸ್ಪತ್ರೆಗಳ ಸಹಯೋಗದೊಂದಿಗೆ ಹೃದಯ ತಪಾಸಣೆ ಶಿಬಿರ, ಉಚಿತ ಆರೋಗ್ಯ ತಪಾಸಣೆ ಹಾಗೂ ಆರೋಗ್ಯ ಜಾಗೃತಿ ಕಾರ್ಯಕ್ರಮಗಳನ್ನು ಮುಂದಿನ ದಿನಗಳಲ್ಲಿ ಆಯೋಜಿಸುವ ನಿರ್ಧಾರವನ್ನು ಸಭೆ ಕೈಗೊಂಡಿತು. ಆರೋಗ್ಯ ಸೇವೆಗಳನ್ನು ಸಮಾಜದ ಸಾಮಾನ್ಯ ಜನರಿಗೆ ತಲುಪಿಸುವ ನಿಟ್ಟಿನಲ್ಲಿ ಮಹಾಸಭೆ ಸಕ್ರಿಯ ಪಾತ್ರ ವಹಿಸಲಿದೆ ಎಂದು ತಿಳಿಸಲಾಯಿತು.

ಸಭೆಯಲ್ಲಿ ತಾಲ್ಲೂಕು ಸಮಿತಿಯ ಉಪಾಧ್ಯಕ್ಷರಾದ ಟಿ.ಪಿ. ನಾಗರಾಜ್ ಹಾಗೂ ಲೀಲಾ ಧರ್ಮಪ್ಪ, ಪ್ರಧಾನ ಕಾರ್ಯದರ್ಶಿ ಹೆಚ್.ವಿ. ಹೇಮಂತ್ ಕುಮಾರ್, ಸಹಕಾರ್ಯದರ್ಶಿ ಶೇಟ್ಟಿಹಳ್ಳಿ ಧರ್ಮ, ಚಾಂಧಿನಿ ಭೂಷಣ್, ಜಿಲ್ಲಾ ಉಪಾಧ್ಯಕ್ಷೆ ಗೀತಾ ಪುಟ್ಟಸ್ವಾಮಿ, ಜಿಲ್ಲಾ ನಿರ್ದೇಶಕರಾದ ಶೋಭನ್ ಬಾಬು, ಹೆಚ್.ಎನ್. ಶರತ್ ಭೂಷಣ್, ಹೆಚ್. ವಿಜಯ್ ಕುಮಾರ್, ತಾಲ್ಲೂಕು ನಿರ್ದೇಶಕರಾದ ರಾಜಶೇಖರ್ ಮೂರ್ತಿ (ಪಾಪು), ಡಿ.ವಿ. ಮದನ್, ಮಯೂರಿ ಲೋಕೇಶ್, ಸಾವಿತ್ರಿ ವಿಜಯ್ ಕುಮಾರ್, ಸಂಪತ್ ಕುಮಾರ್, ಇತರರು ಉಪಸ್ಥಿತರಿದ್ದರು.

# ನೋವು-ಹುಷಾರಿಲ್ಲ ಎಂದರೂ ಆಸರೆಯಾಗದ ಮಕ್ಕಳು

## ಹಿರಿಯ ಜೀವಗಳ ಕಣ್ಣೀರು: ಬಡಪಾಯಿ ವೃದ್ಧಗೆ ಉಚಿತ ಚಿಕಿತ್ಸೆ ನೀಡಿ ಜೀವ ಉಳಿಸಿದ ಶ್ರೀ ಹಾಸನಾಂಬ ಆಸ್ಪತ್ರೆ ವೈದ್ಯರಿಗೆ ದೊಡ್ಡ ಸಲಾಂ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕರುಳ ಬಳ್ಳಿಗಳು ಧರೆಗೆ ಬಂದ ಕ್ಷಣದಿಂದಲೂ ಹೆತ್ತವರು ಕಣ್ಣಲ್ಲಿ ಕಣ್ಣಿಟ್ಟು ಅವರನ್ನು ಕಾಯುತ್ತಾರೆ, ಕಾಪಾಡುತ್ತಾರೆ. ತಾವು ಹೊಟ್ಟೆ ಬಟ್ಟೆ ಕಟ್ಟಿ ಮಕ್ಕಳನ್ನು ದೊಡ್ಡವರನ್ನಾಗಿ ಬೆಳೆಸುತ್ತಾರೆ.


ಇಷ್ಟೆಲ್ಲ ಬೆವರು ಹರಿಸಿದ ತಂದೆ-ತಾಯಿ, ನಮಗೆ ವಯಸ್ಸಾದಾಗ ಅಥವಾ ಅನಾರೋಗ್ಯಕ್ಕೆ ತುತ್ತಾದಾಗ ನಾವು ಬೆಳೆಸಿದ ಮಕ್ಕಳು ಆಸರೆಯಾಗುತ್ತಾರೆಂಬ

ಸಣ್ಣ ಆಸೆ ಇಟ್ಟುಕೊಂಡಿರುತ್ತಾರೆ. ಇದು ಪ್ರತಿಯೊಬ್ಬರ ಸಹಜ ಗುಣಮೂ ಕೂಡ.

ಆದರೆ ಅರಸೀಕೆರೆ ತಾಲೂಕು ಗಂಡಸಿ ಹೋಬಳಿ ನೀರಗುಂದ ಗ್ರಾಮದ ಬಡಪಾಯಿ ರಮೇಶ್(55) ಮತ್ತು ಅವರ ಪತ್ನಿಗೆ ಮಕ್ಕಳು ಆಸರೆಯಾಗುವುದಿರಲಿ, ಕನಿಷ್ಠ ಉಪಚರಿಸುವ ಆದರವನ್ನೂ ತೋರದೆ ಅನಾರೋಗ್ಯ ಪೀಡಿತ ತಂದೆ, ಎರಡೂ ಕಾಲಿಗೆ ಪೆಟ್ಟು ಮಾಡಿಕೊಂಡಿರುವ ತಾಯಿಯನ್ನು ಮಕ್ಕಳು ನೋಡಲು ಬಾರದೇ ಸಂಬಂಧ ಇಲ್ಲ ಎಂಬಂತೆ ದೂರವೇ ಉಳಿದಿದ್ದಾರೆ.

ಪರಿಣಾಮ ತಾಯಿ ನೋವಿನಿಂದ ಹಾಸಿಗೆ ಮೇಲೆ ನರಳುತ್ತಿದ್ದರೆ, ಅನಾರೋಗ್ಯ ತಂದೆ ವೈದ್ಯರ ಮಾನವೀಯ ಸ್ಪಂದನೆಯಿಂದಾಗಿ ಗುಣಮುಖರಾಗಿದ್ದರೂ, ಕನಿಷ್ಠ ಮನೆಗೆ ಕರೆದುಕೊಂಡು ಹೋಗಲು ಬರುತ್ತಿಲ್ಲ. ಇದರಿಂದ ತೀವ್ರವಾಗಿ ನೊಂದಿಕೊಂಡಿರುವ ತಂದೆ-ತಾಯಿ, ಇಂಥ ಮಕ್ಕಳನ್ನು ನಾವೇಕೆ ಜನ್ಮ ನೀಡಿದೆಯೋ ಎಂದು ಹಲುಬುತ್ತಿದ್ದಾರೆ.





ಮಗ ಬೆಂಗಳೂರಿನಲ್ಲಿ ಹೋಟೆಲ್ ಕೆಲಸ ಮಾಡುತ್ತಿದ್ದರೆ, ಮಗಳನು ಮದುವೆ ಮಾಡಿಕೊಡಲಾಗಿದೆ.

ನಡೆದಿರುವುದೇನು: ರಮೇಶ್ ಜೂ.2 ರಂದು ಮೂರ್ಛೆರೋಗದಿಂದ ಪ್ರಜ್ಞೆ ತಪ್ಪಿ ನಾಲಗೆ ಕಚ್ಚಿಕೊಂಡಿದ್ದರಿಂದ ರಕ್ತ ಶ್ವಾಸನಾಳಕ್ಕೆ ಹೋಗಿ ಶ್ವಾಸನಾಳ ಮುಚ್ಚಿಕೊಂಡು ಉಸಿರಾಟದ ತೊಂದರೆಯಿಂದ ಬಳಲುತ್ತಿದ್ದರು.

ಅವರ ಅಣ್ಣನ ಮಗ ಎಂದು ಹೇಳಿ ಯುವಕನೊಬ್ಬ ರಮೇಶ್ ಅವರನ್ನು ಶ್ರೀ ಹಾಸನಾಂಬ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಗೆ ಕರೆ ತಂದು ದಾಖಲು ಮಾಡಿದ. ಆಗ ರೋಗಿಯ ಸ್ಯಾಚುರೇಷನ್ ತುಂಬಾ ಕಡಿಮೆ ಇದ್ದು, ಬಿಪಿ ಸಿಗುತ್ತಿರಲಿಲ್ಲ. ತೀವ್ರ ಉಸಿರಾಟದ ತೊಂದರೆಯಿಂದ ಬಳಲುತ್ತಿದ್ದರು.

ಆಗ ತೀವ್ರ ನಿಗಾ ಘಟಕದ ತಜ್ಞವೈದ್ಯರಾದ ಡಾ.ಪ್ರೇಮಾ ಅವರ ನೇತೃತ್ವದಲ್ಲಿ ರೋಗಿನ

> ಮತ್ತೊಂದು ಅಯ್ಯೋ ಎನಿಸುವ ಸಂಗತಿ ಎಂದರೆ ರಮೇಶ್ ಅವರ ಕಡೆಯ ಯಾರೊಬ್ಬರೂ ಬಾರದೇ ಇದ್ದಾಗ ಡಾ.ಬಸವರಾಜ್ ಅವರೇ ತಮ್ಮ ಸಿಬ್ಬಂದಿಯನ್ನು ನೀರಗುಂದ ಗ್ರಾಮಕ್ಕೆ ಕಳಿಸಿ ಮನೆ ಹುಡುಕಿಸಿ ರೋಗಿಯನ್ನು ತಮ್ಮದೇ ಆಸ್ಪತ್ರೆ ಆ್ಯಂಬುಲೆನ್ಸ್ ಮೂಲಕ ಮನೆಗೆ ಕಳಿಸಲು ಮುಂದಾದರು. ಆದರೆ ರಮೇಶ್ ಅವರ ಪತ್ನಿ ಎರಡೂ ಕಾಲುಗಳಿಗೆ ಪೆಟ್ಟು ಮಾಡಿಕೊಂಡು ಹಾಸಿಗೆ ಹಿಡಿದಿರುವುದು ಗಮನಕ್ಕೆ ಬಂದಿದೆ. ಅವರನ್ನೂ ಯಾರೂ ನೋಡಿಕೊಳ್ಳುತ್ತಿಲ್ಲ ಎಂದು ಡಾ. ಬಸವರಾಜ್ ಅವರು ವೃದ್ಧ ದಂಪತಿಯ ಕರುಣಾಜನಕ ನೋವಿನ ಕಥೆಯನ್ನು ತೆರೆದಿಟ್ಟರು.

ಶ್ವಾಸನಾಳಕ್ಕೆ ಟ್ಯೂಬ್ ಅಳವಡಿಸಿ 4 ದಿನ ವೆಂಟಿಲೇಟರ್ ಅಳವಡಿಸಿ ಚಿಕಿತ್ಸೆ ನೀಡಿದರು. ರೋಗಿಯು ಉಳಿಯುವ ಸಾಧ್ಯತೆ ತುಂಬಾ ಕಡಿಮೆ ಇತ್ತು. ಡಾ.ಪ್ರೇಮಾ ಮತ್ತು ಸಿಬ್ಬಂದಿಯ ಕಾಳಜಿ, ಆರೈಕೆಯಿಂದ ರಮೇಶ್ ಈಗ ಗುಣಮುಖರಾಗಿದ್ದಾರೆ.

ಇದಕ್ಕಾಗಿ ಸುಮಾರು ಎರಡೂವರೆ ಲಕ್ಷ ರೂ.ಖರ್ಚಾಗಿದೆ. ನಾವು ಹಣ ಪಾವತಿಸಿ ಎಂದು ಕೇಳುತ್ತಿಲ್ಲ. ಅವರ ಸ್ಥಿತಿಗತಿ ನೋಡಿ ಉಚಿತವಾಗಿ ಸೇವೆ ಮಾಡಿದ್ದೇವೆ. ಆದರೆ ಉಷಾರಾಗಿರುವ ನಿಮ್ಮ ತಂದೆಯನ್ನು ಕರೆದುಕೊಂಡು ಹೋಗಿ ಎಂದು

ಮಕ್ಕಳಿಗೆ ದೂರವಾಣಿ ಕರೆ ಮಾಡಿದರೆ ಒಂದೆರಡು ಬಾರಿ ರಿಸೀವ್ ಮಾಡಿದರು. ಈಗ ಮೊಬೈಲ್ ಸ್ವಿಚ್ ಆಫ್ ಆಗಿದೆ ಎಂದು ಆಸ್ಪತ್ರೆಯ ವ್ಯವಸ್ಥಾಪಕ ನಿರ್ದೇಶಕ ಡಾ.ಜಿ.ಎನ್.ಬಸವರಾಜು ಸುದ್ದಿಗೋಷ್ಠಿಯಲ್ಲಿ ಬೇಸರದಿಂದಲೇ ತಿಳಿಸಿದರು.

> ಆ್ಯಂಬುಲೆನ್ಸ್ ಮೂಲಕ ರಮೇಶ್ ಅವರನ್ನು ಮನೆಗೆ ಕಳಿಸಲು ನೋಡಿದೆವು. ಆದರೆ ಪತ್ನಿಯ ಸ್ಥಿತಿ ವಿಷಮವಾಗಿದೆ. ಕಾನೂನು ಪ್ರಕಾರ ಅವರಿಗೆ ನೆರವಾಗಲಿ ಎಂದು ಮಹಿಳಾ ಮಕ್ಕಳ ಕಲ್ಯಾಣ ಇಲಾಖೆಯ ಹಿರಿಯರಿಗೆ ಆಶ್ರಯ ವಿಭಾಗದ ಅಧಿಕಾರಿಗಳ ಗಮನಕ್ಕೆ ತರಲಾಗುವುದು. ಜೊತೆಗೆ ಸಂಬಂಧಪಟ್ಟ ಪೊಲೀಸ್ ಠಾಣೆಗೆ ದೂರು ನೀಡಲಾಗುವುದು. ಹೇಗಾದರೂ ಸರಿ ಹಿರಿಯರಿಗೆ ಒಳಿತಾದರೆ ಸಾಕು.
>
> **- ಡಾ.ಜಿ.ಎನ್.ಬಸವರಾಜು, ಹಾಸನಾಂಬ ಆಸ್ಪತ್ರೆ, ಎಂಡಿ**

ತಮ್ಮದಲ್ಲದ ತಪ್ಪಿಗಾಗಿ ಮಕ್ಕಳಿಗಾಗಿ ಬದುಕಿದ್ದೆವು, ಈಗ ಯಾರಿಗಾಗಿ ಬದುಕಬೇಕು ಎಂದು ಹಿರಿಯ ಜೀವಗಳು ಮೂಕವಾಗಿ ಕಣ್ಣೀರಿಡುತ್ತಿವೆ. ಇನ್ನಾದರೂ ಮಕ್ಕಳು ಬಳಿ ಬಂದು ಅಪ್ಪ-ಅಮ್ಮನಿಗೆ ಚಿನ್ನ ಚಿಗುರು ಕೊಡುವುದು ಬೇಡ, ನಿಮ್ಮ ನೋವಿನ ಜೊತೆ ನಾವಿರುತ್ತೇವೆ ಎಂದರೆ ಸಾಕು, ನೊಂದಿರುವ ಜೀವಗಳು ಸಮಾಧಾನ ಪಟ್ಟುಕೊಳ್ಳುತ್ತವೆ. ಅದಾಗಲಿ ಎಂಬುದು ಎಲ್ಲರ ಮನವಿಯಾಗಿದೆ. ಜೊತೆಗೆ ಬಡಪಾಯಿ ರೋಗಿಯಿಂದ ಯಾವುದೇ ಶುಲ್ಕ ಪಡೆಯದೆ ಗುಣಮುಖರನ್ನಾಗಿ ಮಾಡಿ ಮರುಜನ್ಮ ನೀಡಿರುವ ಹಾಸನಾಂಬ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಮುಖ್ಯಸ್ಥರಾದ ಡಾ.ಜಿ.ಎನ್.ಬಸವರಾಜು ಹಾಗೂ ಅವರ ತಂಡದ ಉದಾರತೆಗೆ ಸಾರ್ವಜನಿಕವಾಗಿ ವ್ಯಾಪಕ ಮೆಚ್ಚುಗೆ ವ್ಯಕ್ತವಾಗಿದೆ.

## ಮಾಧ್ಯಮ ಅಕಾಡೆಮಿಯಿಂದ ರಾಷ್ಟ್ರಮಟ್ಟದ ಸುದ್ದಿ ಛಾಯಾಚಿತ್ರ ಸ್ಪರ್ಧೆಹಾಗೂ ಪ್ರದರ್ಶನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕರ್ನಾಟಕ ಮಾಧ್ಯಮ ಅಕಾಡೆಮಿಯು ಸುದ್ದಿ ಛಾಯಾಚಿತ್ರಗ್ರಾಹಕರಿಗಾಗಿ Focus on News" ಎಂಬ ರಾಷ್ಟ್ರಮಟ್ಟದ ಪತ್ರಿಕಾ ಛಾಯಾಚಿತ್ರ ಸ್ಪರ್ಧೆ ಏರ್ಪಡಿಸಿದೆ.

ಈ ಸ್ಪರ್ಧೆಯಲ್ಲಿ ಆಯ್ಕೆಯಾಗುವ ಮೊದಲ ಮೂರು ಛಾಯಾಚಿತ್ರಗಳಿಗೆ ಕ್ರಮವಾಗಿ 35,000 ರೂ, 25,000 ರೂ ಹಾಗೂ 15,000 ರೂ ನಗದು ಬಹುಮಾನ ನೀಡಲಾಗುವುದು. ಆಯ್ದ 50 ಛಾಯಾಚಿತ್ರಗಳ ಪ್ರದರ್ಶನವನ್ನು ಏರ್ಪಡಿಸಲಾಗುವುದು.

ಸ್ಪರ್ಧೆಯ ಷರತ್ತುಗಳು :- ಈ ಸ್ಪರ್ಧೆಗೆ ಪ್ರವೇಶ ಉಚಿತವಾಗಿದ್ದು, ದಿನಾಂಕ :01-01-2025 ರಿಂದ 31-5-2026 ರ ಅವಧಿಯಲ್ಲಿ ಚಿತ್ರಿಸಿರುವ ಚಿತ್ರಗಳನ್ನು ಮಾತ್ರ ಸ್ಪರ್ಧೆಗೆ ಸ್ವೀಕರಿಸಲಾಗುವುದು. ಪ್ರತಿ ಸುದ್ದಿ ಛಾಯಾಚಿತ್ರ ಗ್ರಾಹಕರು ತಾವೇ ಚಿತ್ರಿಸಿರುವ ಹಾಗೂ ಪ್ರಕಟವಾಗಿರುವ ಯಾವುದಾದರೂಎರಡು ಸುದ್ದಿ ಛಾಯಾಚಿತ್ರಗಳನ್ನು ಮಾತ್ರ ಸ್ಪರ್ಧೆಗೆ ಸಲ್ಲಿಸಬಹುದು.

ಸುದ್ದಿ ಛಾಯಾಚಿತ್ರಗಳನ್ನು ಚಿತ್ರಿಸಿರುವುದಕ್ಕೆ ಯಾವುದೇ ಭೌಗೋಳಿಕ ಪರಿಮಿತಿ ಇರುವುದಿಲ್ಲ, ಈ ಸ್ಪರ್ಧೆಯನ್ನು ಸುದ್ದಿ ಛಾಯಾಗ್ರಾಹಕರಿಗಾಗಿ ಮಾತ್ರ ಆಯೋಜಿಸಲಾಗಿದೆ, ಪ್ರತಿಯೊಬ್ಬ ಸ್ಪರ್ಧಿಯೂ ಅವರು ಸುದ್ದಿಛಾಯಾಚಿತ್ರಗ್ರಾಹಕರಾಗಿ ಕಾರ್ಯನಿರ್ವಹಿಸುತ್ತಿರುವ ಪತ್ರಿಕೆಯ ಸಂಪಾದಕರಿಂದ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ದೃಢೀಕರಣ ಪತ್ರ ಅಥವಾ ಆಯಾ ರಾಜ್ಯ ಸರ್ಕಾರಗಳ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಅಥವಾ ಪಿಐಬಿಯು ಪತ್ರಕರ್ತರಿಗಾಗಿ ನೀಡುವ Accreditation Card ಹೊಂದಿರುವವರು ಅದರ ದೃಢೀಕೃತ ಪ್ರತಿಯನ್ನು ಕಡ್ಡಾಯವಾಗಿ ಅರ್ಜಿಯೊಂದಿಗೆ ಲಗತ್ತಿಸಬೇಕು.

ಛಾಯಾಚಿತ್ರಗಳ ಮೇಲೆ ಹೆಸರು, ಶೀರ್ಷಿಕೆ ಹಾಗೂ ವಾಟರ್ ಮಾರ್ಕ್‌ಗಳು ಇರಬಾರದು, ಸ್ಪರ್ಧೆಗೆ ಕಳಿಸುವ ಛಾಯಾಚಿತ್ರಗಳ ಅಂದರೆ ಡಿಜಿಟಲ್ ಇಮೇಜ್ ಗಳನ್ನು JPEG format ನಲ್ಲಿ ಮಾತ್ರ ಸಲ್ಲಿಸಬೇಕು, ಪ್ರದರ್ಶನಕ್ಕೆ ಆಯ್ಕೆಯಾಗುವ ಛಾಯಾಚಿತ್ರಗಳನ್ನು20''x30'' ಅಳತೆಯಲ್ಲಿಮುದ್ರಣ ಮಾಡಿಸಬೇಕಾಗಿರುವುದರಿಂದ ನೀವು ಕಳಿಸುವ ಇಮೇಜ್ ಗಳು 20''x 30'' ಅಳತೆಯ, 300 DPI ನಲ್ಲಿದ್ದು ಕನಿಷ್ಠ 5MB ಗಾತ್ರದಲ್ಲಿರಬೇಕು.

ಮೊಬೈಲ್ ಕ್ಯಾಮೆರಾದಲ್ಲಿ ಚಿತ್ರಿಸಿರುವ ಚಿತ್ರಗಳನ್ನುಸ್ಪರ್ಧೆಗೆಸ್ವೀಕರಿಸಲಾಗುವುದಿಲ್ಲ, ಸ್ಪರ್ಧೆಯಲ್ಲಿ ಭಾಗವಹಿಸುವ ಸುದ್ದಿಛಾಯಾಚಿತ್ರಗಳು ಸಹಜವಾಗಿರಬೇಕು, ಚಿತ್ರದಲ್ಲಿನ ಯಾವುದೇ ಭಾಗವನ್ನುತೆಗೆಯುವುದಾಗಲಿ ಅಥವಾ ಸೇರಿಸುವುದಾಗಲಿ ಮಾಡಿರಬಾರದು. AI ಚಿತ್ರಗಳನ್ನು ಪರಿಗಣಿಸಲಾಗುವುದಿಲ್ಲ.

ಸ್ಪರ್ಧೆಯಲ್ಲಿ ಭಾಗವಹಿಸುವ ಪ್ರತಿಯೊಬ್ಬ ಛಾಯಾಗ್ರಾಹಕರು mediaacademy.karnataka.gov.in ವೆಬ್‌ಸೈಟಿನಲ್ಲಿ ಇರುವ ನಿಗದಿತ ಅರ್ಜಿಯನ್ನು Download ಮಾಡಿಕೊಂಡು ಭರ್ತಿಮಾಡಿ, ತಮ್ಮ ಪಾಸ್ಪೋರ್ಟ್ ಅಳತೆಯ ಭಾವಚಿತ್ರದೊಂದಿಗೆ ಇಮೇಜ್‌ಗಳನ್ನು focusonnewskma@gmail.com ಇ-ಮೇಲ್ ವಿಳಾಸಕ್ಕೆ ಜೂ.30 ರಂದು ಸಂಜೆ 5 ಗಂಟೆ ಒಳಗಾಗಿ ಸಲ್ಲಿಸತಕ್ಕದ್ದು. ನಂತರ ಬಂದ ಚಿತ್ರಗಳನ್ನು ಸ್ಪರ್ಧೆಗೆ ಪರಿಗಣಿಸಲಾಗುವುದಿಲ್ಲ.

# ಬೆಂಗಳೂರು-ಹಾಸನ ಮೆಮು ರೈಲು ಸಕಲೇಶಪುರವರೆಗೆ ವಿಸ್ತರಣೆ ಬೇಡಿಕೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ನವದೆಹಲಿ/ಸಕಲೇಶಪುರ : ಬೆಂಗಳೂರು-ಹಾಸನ ನಡುವೆ ಸಂಚರಿಸುತ್ತಿರುವ ಟ್ರೈನ್ ನಂ. 06583/06584 ಕೆಎಸ್ಆರ್ ಬೆಂಗಳೂರು-ಹಾಸನ ಮೆಮು ಸ್ಪೆಷಲ್ ರೈಲು ಸಂಚಾರವನ್ನು ಸಕಲೇಶಪುರ ರೈಲು ನಿಲ್ದಾಣದವರೆಗೆ ವಿಸ್ತರಿಸುವಂತೆ ಶಾಸಕ ಸಿಮೆಂಟ್ ಮಂಜು ಅವರು, ರೈಲ್ವೆ ರಾಜ್ಯ ಖಾತೆ ಸಚಿವ ವಿ.ಸೋಮಣ್ಣ ಅವರಿಗೆ ಮನವಿ ಸಲ್ಲಿಸಿದರು.

ನವದೆಹಲಿಯಲ್ಲಿ ಸಚಿವರನ್ನು ಭೇಟಿಯಾಗಿ ಸಕಲೇಶಪುರ- ಆಲೂರು ತಾಲ್ಲೂಕುಗಳ ಜನರ ಬಹುಕಾಲದ ಬೇಡಿಕೆ ಜೊತೆಗೆ ವಿವಿಧ ರೈಲ್ವೆ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿ ಕುರಿತು ವಿವರವಾದ ಮನವಿ ಪತ್ರ ಸಲ್ಲಿಸಿದರು.

ಸಕಲೇಶಪುರ-ಆಲೂರು ಭಾಗಗಳು ಭೌಗೋಳಿಕವಾಗಿ ಮಲೆನಾಡು, ಅರೆಮಲೆನಾಡು ಹಾಗೂ ಬಯಲುಸೀಮೆ ಪ್ರದೇಶ ಒಳಗೊಂಡಿದ್ದು, ಪ್ರವಾಸೋದ್ಯಮ, ಶಿಕ್ಷಣ, ಆರೋಗ್ಯ ಹಾಗೂ ಉದ್ಯೋಗದ ದೃಷ್ಟಿಯಿಂದ ರಾಜ್ಯದ ಪ್ರಮುಖ ಸಂಪರ್ಕ ವಲಯಗಳಾಗಿವೆ. ಪ್ರತಿದಿನ ನೂರಾರು ಮಂದಿ ಉದ್ಯೋಗ, ಉನ್ನತ ಶಿಕ್ಷಣ, ವೈದ್ಯಕೀಯ ಚಿಕಿತ್ಸೆ ಮತ್ತು ಆಡಳಿತಾತ್ಮಕ ಕೆಲಸಗಳಿಗಾಗಿ ಬೆಂಗಳೂರಿಗೆ ತೆರಳುತ್ತಿದ್ದು, ಹೆಚ್ಚುತ್ತಿರುವ ಬಸ್ ಪ್ರಯಾಣ ದರದ ಹಿನ್ನೆಲೆ ಕಡಿಮೆ ವೆಚ್ಚದ ರೈಲು



ಸೇವೆಗೆ ಸಾರ್ವಜನಿಕರಿಂದ ಹೆಚ್ಚಿನ ಬೇಡಿಕೆ ವ್ಯಕ್ತವಾಗುತ್ತಿದೆ ಎಂದು ಮನವಿಯಲ್ಲಿ ತಿಳಿಸಲಾಗಿದೆ.

06583 ನಂಬರ್ ಟ್ರೈನ್, ಬೆಳಿಗ್ಗೆ ಕೆಎಸ್ಆರ್-ಬೆಂಗಳೂರಿನಿಂದ ಹೊರಟು ಮಧ್ಯಾಹ್ನ ಹಾಸನ ತಲುಪುತ್ತಿದ್ದು, ಟ್ರೈನ್ ನಂ. 06584 ಹಾಸನದಿಂದ ಬೆಂಗಳೂರಿಗೆ ವಾಪಸ್ಸಾಗುತ್ತಿದೆ. ಈ ಸೇವೆಯನ್ನು ಸಕಲೇಶಪುರವರೆಗೆ ವಿಸ್ತರಿಸಿದರೆ ಎರಡು ತಾಲೂಕುಗಳ ಜನರಿಗೆ ಅನುಕೂಲ ಆಗಲಿದೆ. ಕಡಿಮೆ ವೆಚ್ಚದಲ್ಲಿ ಬೆಂಗಳೂರು ಸಂಪರ್ಕ ಸಾಧ್ಯವಾಗಲಿದೆ ಎಂದು ವಿವರಿಸಿದರು.

ಅಲ್ಲದೆ, ಸಕಲೇಶಪುರ ಗಡಿಭಾಗಗಳಿಗೆ ಹೊಂದಿಕೊಂಡಿರುವ ಕೊಡಗು, ದಕ್ಷಿಣ ಕನ್ನಡ ಹಾಗೂ ಚಿಕ್ಕಮಗಳೂರು ಜಿಲ್ಲೆಗಳ ಸಾರ್ವಜನಿಕರಿಗೂ ಈ ರೈಲು ಸೇವೆಯಿಂದ ಪ್ರಯೋಜನ ದೊರೆಯಲಿದ್ದು, ಮಲೆನಾಡು ಪ್ರವಾಸೋದ್ಯಮಕ್ಕೆ ಉತ್ತೇಜನ ಸಿಗಲಿದೆ ಎಂದಿದ್ದಾರೆ.

ಇದೇ ವೇಳೆ ರೈಲು ಮಾರ್ಗ ವ್ಯಾಪ್ತಿಯಲ್ಲಿ ಮೂಲಸೌಕರ್ಯ ಅಭಿವೃದ್ಧಿಗೆ ಆದ್ಯತೆ ನೀಡುವಂತೆ ಮನವಿ ಸಲ್ಲಿಸಿದ ಶಾಸಕರು, ಆಲೂರು ತಾಲ್ಲೂಕಿನ ಮಡಬಲು, ಯಡೂರು ಹಾಗೂ ಸಕಲೇಶಪುರ ವ್ಯಾಪ್ತಿಯ ಹೊಸೂರು ಭಾಗಗಳಲ್ಲಿ ರೈತರು, ಸಾರ್ವಜನಿಕರು ಹಾಗೂ ವಾಹನ ಸಂಚಾರದ ಸುರಕ್ಷತೆಗೆ ಅಗತ್ಯ ಅಂಡರ್‌ಪಾಸ್ ನಿರ್ಮಿಸುವಂತೆ ಒತ್ತಾಯಿಸಿದರು.

ಜೊತೆಗೆ, ಸಕಲೇಶಪುರ-ಅರೇಹಳ್ಳಿ ಮಾರ್ಗವಾಗಿ ಬೇಲೂರಿಗೆ ಸಂಪರ್ಕ ಕಲ್ಪಿಸುವ ಆಚಂಗಿ ಸಮೀಪದ ರೈಲ್ವೆ ಮೇಲ್ಸೇತುವೆ ಶಿಥಿಲಾವಸ್ಥೆಯಲ್ಲಿದ್ದು, ಮಳೆಗಾಲದಲ್ಲಿ ಅಪಾಯದ ಸಾಧ್ಯತೆ ಹೆಚ್ಚಿದೆ. ಸಾರ್ವಜನಿಕರ ಸುರಕ್ಷತೆ ದೃಷ್ಟಿಯಿಂದ ತುರ್ತು ದುರಸ್ತಿ ಕಾಮಗಾರಿ ಕೈಗೊಳ್ಳುವಂತೆ ಸಚಿವರ ಗಮನ ಸೆಳೆದರು.

ಕ್ಷೇತ್ರದ ಜನರ ದೀರ್ಘಕಾಲದ ಬೇಡಿಕೆಗಳಿಗೆ ಸ್ಪಂದಿಸಿ ರೈಲು ಸೇವೆ ವಿಸ್ತರಣೆ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳಿಗೆ ಆದ್ಯತೆ ನೀಡಿ ಅಗತ್ಯ ಕ್ರಮ ಕೈಗೊಳ್ಳುವಂತೆ ವಿನಂತಿಸಿದರು.

# ಮುಂದುವರಿದ ಹಣ ಕಳೆದುಕೊಂಡವರ ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸೂರ್ಯೋದಯ ಸ್ಮಾಲ್ ಫೈನಾನ್ಸ್ ಬ್ಯಾಂಕ್‌ನ ಮಾಜಿ ಮ್ಯಾನೇಜರ್ ಪೂಜಾ ಹೆಚ್.ಎಸ್. ಎಂಬುವರು ಸಬ್ಸಿಡಿ ರೂಪದಲ್ಲಿ ಸಾಲ ಮಾಡಿಸಿಕೊಡುವುದಾಗಿ ನಂಬಿಸಿ

ಸುಮಾರು 60ಕ್ಕೂ ಹೆಚ್ಚು ಗ್ರಾಹಕರಿಂದ 4 ಕೋಟಿಗೂ ಅಧಿಕ ಹಣ ಪಡೆದು ವಂಚನೆ ಎಸಗಿರುವ ಆರೋಪ ಸಂಬಂಧ ಪ್ರಕರಣ ದಾಖಲಾಗಿದ್ದರೂ, ಸಮರ್ಪಕ ತನಿಖೆ ನಡೆದಿಲ್ಲ

ಹಾಗೂ ಆರೋಪಿಯನ್ನು ಬಂಧಿಸಿಲ್ಲ ಎಂದು ಆರೋಪಿಸಿ ಸಂತ್ರಸ್ತರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ದೂರು ಸಲ್ಲಿಸಿದರು

ಈ ವೇಳೆ ನೊಂದ ಸಂತ್ರಸ್ತ ವಿಶ್ವಾಸ್ ಮಾತನಾಡಿ, ಆರೋಪಿ ಪೂಜಾ ಹೆಚ್.ಎಸ್. ಅವರ ವಿರುದ್ಧ ಅವರ ತಂಗಿ ತೇಜಾ, ಪಲ್ಲವಿ, ನಾಗರತ್ನ ಹಾಗೂ ಬ್ಯಾಂಕ್ ಕ್ಯಾಶಿಯರ್

ರಾಜೇಶ್ ಅವರ ಹೆಸರನ್ನೂ ಉಲ್ಲೇಖಿಸಿ ಪೆನ್ಷನ್ ಮೊಹಲ್ಲಾ ಪೊಲೀಸ್ ಠಾಣೆಯಲ್ಲಿ 2026ರ




ಮಾ.1 ರಂದು ಎಫ್ಐಆರ್ ದಾಖಲಾಗಿದೆ.

ದೂರು ದಾಖಲಾಗಿ 45 ದಿನ ಕಳೆದರೂ ಪ್ರಮುಖ ಆರೋಪಿಗಳ ಬಂಧನವಾಗದಿರುವುದು ಸಂತ್ರಸ್ತರಲ್ಲಿ ಅಸಮಾಧಾನ ಮೂಡಿಸಿದೆ. ಸಂತ್ರಸ್ತರ ಆರೋಪದಂತೆ,ಪ್ರಕರಣದ ತನಿಖೆ

ಹೊಣೆ ಹೊತ್ತಿರುವ ಪೊಲೀಸ್ ಅಧಿಕಾರಿಗಳು ನಿರ್ಲಕ್ಷ್ಯ ತೋರಿದ್ದಾರೆ ಎಂದು ದೂರಿದರು.

ಪ್ರಮುಖ ಆರೋಪಿ ಪೂಜಾ ಅವರು ಕೆಲ ದೂರುದಾರರಿಗೆ ಕರೆ ಮಾಡಿ ತಮ್ಮ ವಿರುದ್ಧ ನೀಡಿರುವ ದೂರು ಹಿಂಪಡೆಯುವಂತೆ ಒತ್ತಡ ಹೇರಿದ್ದಾರೆ ಎಂದು ಹೇಳಲಾಗಿದೆ. ಹಣ ವಾಪಸ್ ಕೊಡುವ ಬಗ್ಗೆ ಏನೇನೋ ಹೇಳುತ್ತಿದ್ದಾರೆ. ಪ್ರಕರಣದ ತನಿಖೆ ನಡೆಸುತ್ತಿರುವ ಇನ್ಸ್‌ಪೆಕ್ಟರ್ ಸ್ವಾಮಿನಾಥನ್ ಅವರು ಸೂಕ್ತವಾಗಿ ತನಿಖೆ ಮಾಡುತ್ತಿಲ್ಲ. ಇದು ಆರೋಪಿಗಳಿಗೆ ಪರೋಕ್ಷವಾಗಿ ಸಹಕಾರ ನೀಡಿರುವ ಅನುಮಾನ ಮೂಡಿಸಿದೆ ಎಂದರು. ಈ ಸಂಬಂಧ ತಮ್ಮ ಬಳಿ ಕೆಲ ಆಡಿಯೋ, ವಿಡಿಯೋ ಹಾಗೂ ಸಂದೇಶಗಳ ದಾಖಲೆಗಳಿದ್ದು, ಅವುಗಳನ್ನು ತನಿಖಾ ಅಧಿಕಾರಿಗಳಿಗೆ ಸಲ್ಲಿಸಲು ಸಿದ್ಧವಿದ್ದೇವೆ ಎಂದು ಹೇಳಿದರು. ಇನ್ನೊಂದೆಡೆ, ಪೊಲೀಸ್ ಸಿಬ್ಬಂದಿ ಪ್ರವೀಣ್ ಎಂಬುವರ ಹೆಸರು ದೂರಿನಲ್ಲಿ ಪ್ರಸ್ತಾಪವಾಗಿದ್ದು, ಅವರು ಪ್ರಮುಖ ಆರೋಪಿ ಜೊತೆ ವೈಯಕ್ತಿಕ ಸಂಪರ್ಕ ಹೊಂದಿದ್ದಾರೆ ಎಂದು ಆರೋಪಿಸಿದರು. ಹೀಗಾಗಿ ಅವರ ಪಾತ್ರದ ಬಗ್ಗೆಯೂ ತನಿಖೆ ನಡೆಯಬೇಕು ಎಂದು ಮನವಿ ಮಾಡಿದರು.

ಎಸ್ಪಿ ಅವರು ತನಿಖೆ ಚುರುಕುಗೊಳಿಸಿ ಆರೋಪಿಗಳನ್ನು ಬಂಧಿಸುವಂತೆ ಸೂಚನೆ ನೀಡಿದ್ದರೂ, ಅದು ಸಾಧ್ಯವಾಗುತ್ತಿಲ್ಲ. ಸ್ವತಂತ್ರ ತನಿಖಾ ಸಂಸ್ಥೆ ಅಥವಾ ಉನ್ನತ ಮಟ್ಟದ ಅಧಿಕಾರಿಗಳಿಂದ ತನಿಖೆ ನಡೆಸುವಂತೆ ಅವರು ಒತ್ತಾಯಿಸಿದರು.

ಇದಕ್ಕೂ ಮುನ್ನ ಹೇಮಾವತಿ ಪ್ರತಿಮೆ ಬಳಿ ಪ್ರತಿಭಟನೆ ನಡೆಸಲು ಪೊಲೀಸರು ಅನುಮತಿ ನಿರಾಕರಿಸಿದಾಗ ಸಣ್ಣ ಪ್ರಮಾಣದ ವಾಗ್ವಾದ ನಡೆಯಿತು. ನಂತರ ನೇರವಾಗಿ ಎಸ್ಪಿಗೆ ಮನವಿ ಸಲ್ಲಿಸಲಾಯಿತು. ಸಂತ್ರಸ್ತರಾದ ಶ್ರೀಧರ್, ಉಮೇಶ್, ಧರ್ಮನಾಯಕ್, ಚಂದ್ರೇಗೌಡ, ಯೋಗೀಶ್, ಶ್ರೀನಿವಾಸ್, ಗೀತಾ, ವಿನಯ್ ಇದ್ದರು.

## ನಾನು ಯಾರು? ನಾನು ಜೀವನ ಮಾಡುತ್ತಿದ್ದೀನೆಯೇ ಅಥವಾ ಬದುಕುತ್ತಿದ್ದೀನೆಯೇ?



**ಅಂತೋಣಿ ಮುತ್ತು ವಿ**
**ಶಿಕ್ಷಕರು, 7259675543**

ಮಾನವ ಜೀವನವು ಅತ್ಯಂತ ಅಮೂಲ್ಯವಾದ ಕೊಡುಗೆ. ಆದರೆ ನಾವು ನಮ್ಮನ್ನು ನಾವು ಒಂದು ಬಾರಿ ಕೇಳಿಕೊಳ್ಳಬೇಕಾದ ಪ್ರಶ್ನೆ ಎಂದರೆ ''ನಾನು ಯಾರು?'' ಮತ್ತು ''ನಾನು ಕೇವಲ ಜೀವನ ಮಾಡುತ್ತಿದ್ದೀನೆಯೇ ಅಥವಾ ನಿಜವಾಗಿಯೂ ಬದುಕುತ್ತಿದ್ದೀನೆಯೇ?''

ನಾನು ಈ ಜಗತ್ತಿನಲ್ಲಿ ಒಂದು ವಿಶಿಷ್ಟ ವ್ಯಕ್ತಿ.ನನ್ನದೇ ಆದ ಆಲೋಚನೆಗಳು,ಕನಸುಗಳು, ಗುರಿಗಳು ಮತ್ತು ಮೌಲ್ಯಗಳಿವೆ.ನನ್ನ ಗುರುತು ಕೇವಲ ನನ್ನ ಹೆಸರು ಅಥವಾ ವೃತ್ತಿಯಿಂದ ಮಾತ್ರ ಅಲ್ಲ; ನನ್ನ ನಡತೆ,ಗುಣ, ಮಾನವೀಯತೆ ಮತ್ತು ಇತರರೊಂದಿಗೆ ನಾನು ಹೇಗೆ ವರ್ತಿಸುತ್ತೇನೆ ಎಂಬುದರಿಂದ ನಿರ್ಧಾರವಾಗುತ್ತದೆ.

ಇಂದಿನ ವೇಗದ ಜೀವನದಲ್ಲಿ ಅನೇಕರು ಹಣ ಸಂಪಾದನೆ, ಕೆಲಸ ಮತ್ತು ಜವಾಬ್ದಾರಿಗಳ ನಡುವೆ ತೊಡಗಿಸಿಕೊಂಡಿದ್ದಾರೆ. ಅವರು ಜೀವನವನ್ನು ನಡೆಸುತ್ತಿದ್ದಾರೆ,ಆದರೆ ಬದುಕುವುದನ್ನು ಮರೆತಿದ್ದಾರೆ. ಕೇವಲ ಉಸಿರಾಡುವುದು ಬದುಕಲ್ಲ.ಸಂತೋಷವನ್ನು ಅನುಭವಿಸುವುದು,ಕುಟುಂಬದೊಂದಿಗೆ ಸಮಯ ಕಳೆಯುವುದು,ಸ್ನೇಹಿತರನ್ನು ಗೌರವಿಸುವುದು,ಪ್ರಕೃತಿಯನ್ನು ಪ್ರೀತಿಸುವುದು ಮತ್ತು ಇತರರಿಗೆ ಸಹಾಯ ಮಾಡುವುದು ನಿಜವಾದ ಬದುಕು.ಜೀವನ ಮಾಡುವುದು ಎಂದರೆ ದಿನನಿತ್ಯದ ಕರ್ತವ್ಯಗಳನ್ನು ಪೂರೈಸುವುದು.ಆದರೆ ಬದುಕುವುದು ಎಂದರೆ ಪ್ರತಿಯೊಂದು ಕ್ಷಣವನ್ನು ಅರ್ಥಪೂರ್ಣವಾಗಿಸುವುದು. ನಾವು ನಮ್ಮ ಕನಸುಗಳನ್ನು ಸಾಕಾರಗೊಳಿಸಲು ಪ್ರಯತ್ನಿಸಿದಾಗ,ಸಮಾಜಕ್ಕೆ ಒಳ್ಳೆಯದನ್ನು ಮಾಡಿದಾಗ ಮತ್ತು ನಮ್ಮ ಜೀವನದಿಂದ ಇತರರಿಗೂ ಪ್ರೇರಣೆಯಾಗುವಂತೆ ನಡೆದುಕೊಂಡಾಗ ನಿಜವಾದ ಬದುಕಿನ ಸಾರ್ಥಕತೆ ಕಂಡುಬರುತ್ತದೆ.ಆದ್ದರಿಂದ ನಾನು ಕೇವಲ ಜೀವನ ನಡೆಸುವುದಕ್ಕಿಂತ ಉತ್ತಮ ವ್ಯಕ್ತಿಯಾಗಿ ಬದುಕಲು ಪ್ರಯತ್ನಿಸಬೇಕು.

ನನ್ನ ಜೀವನವು ನನಗೆ ಮಾತ್ರವಲ್ಲ,ಇತರರಿಗೂ ಬೆಳಕಾಗಬೇಕು.ಆಗ ಮಾತ್ರ ''ನಾನು ಯಾರು?''ಎಂಬ ಪ್ರಶ್ನೆಗೆ ಅರ್ಥಪೂರ್ಣ ಉತ್ತರ ದೊರೆಯುತ್ತದೆ.ಜೀವನವನ್ನು ಕಳೆಯಬೇಡಿ;ಅದನ್ನು ಅರ್ಥಪೂರ್ಣವಾಗಿ ಬದುಕಿ.

# ಶಿವಲಿಂಗೇಗೌಡರಿಗೆ ಸಚಿವ ಸ್ಥಾನ ಖಚಿತ

## ಮಹಿಳಾ ಅಧಿಕಾರಿಗಳ ಮೇಲಷ್ಟೇ ರೇವಣ್ಣಗೇಕೆ ಕೋಪ : ಸಂಸದ ಶ್ರೇಯಸ್ ಪಟೇಲ್ ವಾಗ್ದಾಳಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ : ಶಾಸಕ ಕೆ.ಎಂ. ಶಿವಲಿಂಗೇಗೌಡ ಅವರಿಗೆ ಈ ಬಾರಿ ಸಚಿವ ಸ್ಥಾನ ಸಿಗುವುದು ಬಹುತೇಕ ಖಚಿತ ಎಂದು ಹಾಸನ ಸಂಸದ ಶ್ರೇಯಸ್ ಪಟೇಲ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಇದೇ ವೇಳೆ, ಹಾಸನ ಜಿಲ್ಲಾಧಿಕಾರಿ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದ ಮಾಜಿ ಸಚಿವ ಎಚ್.ಡಿ. ರೇವಣ್ಣ ಅವರ ವಿರುದ್ಧ ಸಂಸದರು ತೀವ್ರ ಆಕ್ರೋಶ ಹೊರಹಾಕಿದ್ದಾರೆ.

ಹಾಸನದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಸಂಸದರು, ಜಿಲ್ಲೆಯ ರಾಜಕೀಯ ಬೆಳವಣಿಗೆಗಳು ಹಾಗೂ ಅಧಿಕಾರಿಗಳ ವಿರುದ್ಧದ ಆರೋಪಗಳ ಬಗ್ಗೆ ಮುಕ್ತವಾಗಿ ಪ್ರತಿಕ್ರಿಯಿಸಿದರು.

ಶಿವಲಿಂಗಣ್ಣ ಸಚಿವರಾಗುವುದು ಖಚಿತ:

ಸಚಿವ ಸಂಪುಟ ವಿಸ್ತರಣೆ ಅಥವಾ ಪುನಾರಚನೆ ವಿಚಾರದ ಬಗ್ಗೆ ಮಾತನಾಡಿದ ಅವರು, "ಈ ಬಾರಿ ಖಂಡಿತವಾಗಿಯೂ ಹಾಸನ ಜಿಲ್ಲೆಗೆ ಸಚಿವ ಸಂಪುಟದಲ್ಲಿ ಪ್ರಾತಿನಿಧ್ಯ ಸಿಗುವ ಸಂಪೂರ್ಣ ಭರವಸೆ



ನಮಗಿದೆ. ಹಿರಿಯ ಶಾಸಕರಾಗಿರುವ ಕೆ.ಎಂ. ಶಿವಲಿಂಗಣ್ಣ ಅವರು ಸಚಿವರಾಗುವುದು ಬಹುತೇಕ ಖಚಿತ" ಎಂದು ತಿಳಿಸಿದರು.

### ರೇವಣ್ಣ ಆರೋಪ ಅಕ್ಷಮ್ಯ ಅಪರಾಧ, ಕಾನೂನುಬಾಹಿರ

ಹಾಸನ ಜಿಲ್ಲಾಧಿಕಾರಿಗಳ ಕಾರ್ಯವೈಖರಿ ಬಗ್ಗೆ ಎಚ್.ಡಿ. ರೇವಣ್ಣ ಮಾಡಿದ್ದ ಟೀಕೆಗಳಿಗೆ ತಿರುಗೇಟು ನೀಡಿದ ಶ್ರೇಯಸ್ ಪಟೇಲ್, "ಜಿಲ್ಲಾಧಿಕಾರಿಗಳು ಪ್ರಾಮಾಣಿಕತೆ ಹಾಗೂ ದಕ್ಷತೆಯಿಂದ ಒಳ್ಳೆಯ ಕೆಲಸ ಮಾಡುತ್ತಿದ್ದಾರೆ ಎಂದು ಜನರೇ ಹೇಳುತ್ತಿದ್ದಾರೆ. 2023ರಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದಲೂ ಅಧಿಕಾರಿಗಳು ಪ್ರಾಮಾಣಿಕವಾಗಿ ಕೆಲಸ ಮಾಡುತ್ತಿದ್ದಾರೆ. ಎಚ್.ಡಿ. ರೇವಣ್ಣ ಅವರು ಯಾವ ವಿಷಯಕ್ಕೆ ಆಪಾದನೆ ಮಾಡುತ್ತಿದ್ದಾರೆ ಎಂಬ ಮಾಹಿತಿ ನನಗಿಲ್ಲ. ಯಾವುದೇ ಆರೋಪ ಮಾಡುವುದಿದ್ದರೂ ಅಗತ್ಯ ದಾಖಲೆಗಳೊಂದಿಗೆ ಮಾಡಬೇಕು" ಎಂದು ಸವಾಲು ಹಾಕಿದರು.

"ಸರ್ಕಾರಿ ಕಚೇರಿಯಲ್ಲಿಯೇ ಅಧೀನ ಅಧಿಕಾರಿಗಳ ಜೊತೆ ಕುಳಿತುಕೊಂಡು ಮೇಲಾಧಿಕಾರಿಗಳ ಬಗ್ಗೆ ಮಾತನಾಡುವುದು ಅಕ್ಷಮ್ಯ ಅಪರಾಧ ಹಾಗೂ ಕಾನೂನುಬಾಹಿರ. ಹಿರಿಯ ಶಾಸಕರಾಗಿರುವ ಅವರು ಮೊದಲು ಇದನ್ನು ತಿಳಿದುಕೊಳ್ಳಬೇಕು. ಸರ್ಕಾರಿ ಸಭೆಯಲ್ಲಿ ಅಧಿಕಾರಿಯೊಬ್ಬರ ಬಗ್ಗೆ ಈ ರೀತಿ ಮಾತನಾಡುವುದು ಸಂವಿಧಾನ, ಕಾನೂನು, ಶಾಸಕಾಂಗ ಹಾಗೂ ಕಾರ್ಯಾಂಗದ ನಿಯಮಗಳಲ್ಲೇ ಇಲ್ಲ.

ಇದನ್ನು ಅರಿತು ಅವರು ಮುಂದೆ ಅಧಿಕಾರಿಗಳ ಬಗ್ಗೆ ಮಾತನಾಡಲಿ" ಎಂದು ಎಚ್ಚರಿಕೆ ನೀಡಿದರು.

"ಜಿಲ್ಲಾಧಿಕಾರಿಗಳು ಪ್ರಾಮಾಣಿಕವಾಗಿ ಕೆಲಸ ಮಾಡುತ್ತಿದ್ದಾರೆ, ಒಂದು ವೇಳೆ ಹಾಗಲ್ಲದಿದ್ದರೆ ಸಾರ್ವಜನಿಕರೇ ಮಾಧ್ಯಮಗಳ ಮುಂದೆ ಬಂದು ಹೇಳುತ್ತಿದ್ದರು. ರೇವಣ್ಣ ಅವರು ಹಿಂದಿನ ಜಿಲ್ಲಾಧಿಕಾರಿ (ಅವರೂ ಮಹಿಳೆ) ಬಗ್ಗೆಯೂ ಇದೇ ರೀತಿ ಮಾತನಾಡಿದ್ದರು. ಒಂದು ಕಡೆ 33% ಮಹಿಳಾ ಮೀಸಲಾತಿಗಾಗಿ ಹೋರಾಟ ನಡೆಯುತ್ತಿದ್ದರೆ, ಇವರೇಕೆ ಮಹಿಳಾ ವಿರೋಧಿಯಾಗಿ ನಡೆದುಕೊಳ್ಳುತ್ತಿದ್ದಾರೆ?" ಎಂದು ಪ್ರಶ್ನಿಸಿದರು.

"ಇಡೀ ರಾಜ್ಯದಲ್ಲಿ ಮಹಿಳಾ ಅಧಿಕಾರಿಗಳ ಮೇಲೆ ಇಲ್ಲಸಲ್ಲದ ಆರೋಪ ಮಾಡುವ ಏಕೈಕ ಶಾಸಕ ಎಂದರೆ ಅದು ರೇವಣ್ಣ ಇರಬೇಕು. ಅಧಿಕಾರಿಗಳು ತಮ್ಮ ಪಾಡಿಗೆ ತಾವು ಕೆಲಸ ಮಾಡಿಕೊಂಡು ಹೋಗುತ್ತಿದ್ದರೆ, ಅವರ ಮೇಲೆ ವಿನಾಕಾರಣ ಆರೋಪ ಮಾಡುತ್ತಿದ್ದಾರೆ" ಎಂದು ಶ್ರೇಯಸ್ ಪಟೇಲ್ ತೀವ್ರ ವಾಗ್ದಾಳಿ ನಡೆಸಿದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248